**ಎಂವಿಸಿ ಸಂಖ್ಯೆಃ 2275/2024 ಪಿಡಬ್ಲೂಃ1**

**ದಿನಾಂಕಃ 13-02-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಬಾಬ್ತು ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿ ಹೇಳಿ ಬರೆಸಿರುವ ಎಲ್ಲ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿ ಬರೆದಿರುವ ವಿಷಯಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಸಾಕ್ಷಿದಾರರು ದಾಖಲಾತಿಗಳನ್ನು ನೋಡಿ ಗುರುತಿಸಿರುತ್ತಾರೆ.

1. ಅಪಘಾತಕ್ಕೆ ಸಂಬಂಧಿಸಿದ ಪ್ರ.ವ. ವರದಿಯ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.
2. ದೂರಿನ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.
3. ಸ್ಥಳ ಪಂಚನಾಮೆಯ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-3 ಎಂದು ನಕ್ಷೆಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.
4. ವಾಹನದ ಪಂಚನಾಮೆಯ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.
5. ಐಎಂವಿ ವರದಿಯ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.
6. ಶವ ಪರೀಕ್ಷಾ ವರದಿಯನ್ನು ನಿಪಿ-6 ಎಂದು ಗುರುತಿಸಲಾಯಿತು.
7. ಶವ ಪಂಚನಾಮೆಯನ್ನು ನಿಪಿ-7 ಎಂದು ಗುರುತಿಸಲಾಯಿತು.
8. ಅಂತಿಮ ವರದಿಯನ್ನು ನಿಪಿ-8 ಎಂದು ಗುರುತಿಸಲಾಯಿತು.
9. ನನ್ನ ಗಂಡನ ಮೂಲ ಆಧಾರ ಕಾರ್ಡ ಮತ್ತು ಪಾನ್ ಕಾರ್ಡನ್ನು ಕ್ರಮವಾಗಿ ನಿಪಿ-9 ಮತ್ತು 10 ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಮುಂದಿನ ಮುಖ್ಯ ವಿಚಾರಣೆಗೆ ಸಮಯವಕಾಶ ಕೋರಿದ್ದರಿಂದ ಸಮಯ ನೀಡಿ ಮುಂದಿನ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

**(ಓ.ಹೇ.ಕೇ.ಸ.)**

2 **ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ರಾಣೆಬೆನ್ನೂರ.**

ಸಾಕ್ಷಿದಾರರ ಸಹಿಃ